- -

ಓ. ಎಸ್. ನಂಃ187/2019

ಪಿ. ಡಬ್ಲ್ಯೂಃ 1

ದಿಃ 19-10-2022 ರಂದು ಸಾಕ್ಷಿಯನ್ನು ಕರೆಸಿ ಪ್ರಮಾಣ ವಚನ ಬೋಧಿಸಲಾಯಿತು.

ಮುಖ್ಯ ವಿಚಾರಣೆಃ ಶ್ರೀ ಕೆ ಎಸ್ ಪಿ ಪ್ರತಿವಾದಿ ಪರ ವಕೀಲರಿಂದ.

ಈ ದಾವೆಯಲ್ಲಿ ನಾನು 2 ನೇ ವಾದಿಯಾಗಿದ್ದು, ಇಂದು ನನ್ನ ಮೌಖಿಕ ಸಾಕ್ಷ್ಯದ ಬದಲು ನನ್ನ ಮುಖ್ಯ ವಿಚಾರಣೆಯ ಪ್ರಮಾಣ ಪತ್ರವನ್ನು ಸಲ್ಲಿಸಿದ್ದು. ನನ್ನ ಮುಖ್ಯ ವಿಚಾರಣೆ ಪ್ರಮಾಣ ಪತ್ರದಲ್ಲಿ ಬರೆದ ಎಲ್ಲ ವಿಷಯಗಳು ನಿಜ ವ ಸತ್ಯ ಇರುತ್ತವೆ

ಈ ಕೆಳಕಂಡ ದಾಖಲೆಗಳನ್ನು ಹಾಜರುಪಡಿಸಿರುತ್ತೇನೆ.

ಎರಡು ಆಕರಣೆ ಯಾದಿಗಳನ್ನು ಹಾಜರುಪಡಿಸಿದ್ದು ಅವುಗಳನ್ನು ನಿಪಿ-1 ಮತ್ತು 2 ಎಂದು, ಪಂಚಾಯಿತಿ ದಾಖಲೆಯನ್ನು ಹಾಜರುಪಡಿಸಿದ್ದು ಅದನ್ನು ನಿಪಿ-3 ಎಂದು, 1 ನೇ ಪ್ರತಿವಾದಿಯು 2 ನೇ ಪ್ರತಿವಾದಿಗೆ ಖರೀದಿ ಪತ್ರ ಸಂಖ್ಯೆ 186/2019-20 ಮಾಡಿಕೊಟ್ಟಿದ್ದು ಅದರ ಮೂಲ ಪ್ರತಿಯು ನನ್ನ ಹತ್ತಿರ ಇರುವುದಿಲ್ಲ ಆದ್ದರಿಂದ ಅದರ ದೃಡಿಕೃತ ನಕಲನ್ನು ನ್ಯಾಯಾಲಯಕ್ಕೆ ಹಾಜರುಪಡಿಸಿರುತ್ತೇನೆ. ಸದರಿ ಖರೀದಿ ಪತ್ರದ ದೃಡಿಕೃತ ನಕಲನ್ನು ನಿಪಿ-4 ಎಂದು ಗುರುತಿಸಲಾಯಿತು ಮತ್ತು ದಿ 17-05-2019 ರ ಅರ್ಜಿಯನ್ನು ಹಾಜರುಪಡಿಸಿದ್ದು ಅದನ್ನು ನಿಪಿ-5 ಎಂದು ಗುರುತಿಸಲಾಯಿತು.

ಈ ಹಂತದಲ್ಲಿ ವಾದಿ ಪರ ವಕೀಲರು ಸಮಯ ಕೋರಿದ್ದರಿಂದ ಮುಂದುವರೆದ ಮುಖ್ಯ ವಿಚಾರಣೆಗಾಗಿ ಮುಂದೂಡಲಾಯಿತು.

(ತೆರೆದ ನ್ಯಾಯಾಲಯದಲ್ಲಿ ನನ್ನ ಸಮಕ್ಷಮ ನನ್ನ ಉಕ್ತ ಲೇಖನದ ಮೇಲೆ ಬೆರಳಚ್ಚು ಮಾಡಲಾಯಿತು.)

ಓ ಹೆ ಕೆ ಸರಿ ಅದೆ.

ಸಿವಿಲ್ ನ್ಯಾಯಾಧೀಶರು, ಶಿಗ್ಗಾಂವ.